(ಈ) ಬಂದಿದೆ.

(ಉ) ಚಿಕ್ಕಬಳ್ಳಾಪುರ ಪಟ್ಟಣದಲ್ಲಿ ವಸತಿ ಯೋಜನೆಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದ್ದು, ಜಮೀನು ಸಂಗ್ರಹಣೆಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಜಮೀನು ಸಂಗ್ರಹಣೆ ನಂತರ, ನಿವೇಶನಗಳನ್ನು ಅಭಿವೃದ್ಧಿಪಡಿಸಿ ಅವುಗಳ ಹಂಚಿಕೆಗೆ ಕ್ರಮ ವಹಿಸಲಾಗುವುದು.

ನಂದಿಗಿರಿಧಾಮಕ್ಕೆ ರೋಪ್‌ವೇ ಅಳವಡಿಸುವುದು.

313 (222) ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ) :– ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ ?

(ಅ) ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ನಂದಿ ಬೆಟ್ಟಕ್ಕೆ (ನಂದಿ ಗಿರಿಧಾಮ) ರೋಪ್‌ವೇಯನ್ನು ಅಳವಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಹಾಗಿದ್ದಲ್ಲಿ, ಯಾವಾಗ ಅಳವಡಿಸಲಾಗುವುದು ;

(ಇ) ಈ ಯೋಜನೆಗೆ ತಗಲುವ ವೆಚ್ಚವೆಷ್ಟು ;

(ಈ) ಈ ಯೋಜನೆಯ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು;

(ಉ) ಈ ಯೋಜನೆಯನ್ನು ಪೂರ್ಣಗೊಳಿಸಲು ಸರ್ಕಾರ ಕಾಲಮಿತಿಯನ್ನೇನಾದರೂ ವಿಧಿಸಿದೆಯೇ;

(ಊ) ಕಳೆದ ಎರಡು ವರ್ಷಗಳಲ್ಲಿ ನಂದಿ ಬೆಟ್ಟದಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು;

(ಋ) ಈ ಕಾಮಗಾರಿಗಳಿಗೆ ಸರ್ಕಾರ ಈವರೆವಿಗೂ ಬಿಡುಗಡೆ ಮಾಡಿರುವ ಹಾಗೂ ವೆಚ್ಚ ಮಾಡಿರುವ ಅನುದಾನದ ಮೊತ್ತ ಎಷ್ಟು (ವರ್ಷವಾರು ವಿವರಗಳನ್ನು ನೀಡುವುದು)

ಶ್ರೀ ಜಿ. ಜನಾರ್ಧನ ರೆಡ್ಡಿ (ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು) :–

(ಅ) ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

(ಆ) ಅನ್ವಯಿಸುವುದಿಲ್ಲ.

(ಇ) ಅನ್ವಯಿಸುವುದಿಲ್ಲ

(ಈ) ಅನ್ವಯಿಸುವುದಿಲ್ಲ

(ಉ) ಅನ್ವಯಿಸುವುದಿಲ್ಲ

(ಊ) ನಂದಿ ಬೆಟ್ಟದ ಮೇಲಿರುವ ಉದ್ಯಾನವನ್ನು ರೂ. 100.00ಲಕ್ಷ ಅಂದಾಜು ವೆಚ್ಚದಲ್ಲಿ ಉನ್ನತೀಕರಿಸುವ ಕಾಮಗಾರಿಯನ್ನು ತೋಟಗಾರಿಕೆ ಇಲಾಖೆ ಮೂಲಕ ಕೈಗೆತ್ತಿಕೊಳ್ಳಲಾಗಿದೆ.

(ಋ) ಈ ಕಾಮಗಾರಿಗಾಗಿ 2009–10ನೇ ಸಾಲಿನಲ್ಲಿ ರೂ.30.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. 2010–11ನೇ ಸಾಲಿನಲ್ಲಿ ರೂ.70.00 ಲಕ್ಷಗಳನ್ನು ಬಿಡುಗಡೆ ಮಾಡಲಾಗುವುದು.

ಮುಜರಾಯಿ ದೇವಸ್ಥಾನಗಳ ಅಭಿವೃದ್ಧಿ.

316 (414) ಶ್ರೀ ಬಂಡೆಪ್ಪ ಕಾಶೆಂಪೂರ್ :– ಮಾನ್ಯ ಗೃಹ ಹಾಗೂ ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ ?

(ಅ) ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಮುಜರಾಯಿ ದೇವಸ್ಥಾನಗಳ ಸಂಖ್ಯೆ ಎಷ್ಟು : ಎಲ್ಲಿವೆ ಮತ್ತು ಯಾವುವು (ವಿವರಗಳನ್ನು ನೀಡುವುದು);

(ಆ) ಈ ದೇವಸ್ಥಾನಗಳಲ್ಲಿ ಎಷ್ಟು ಹಣ ಇದೆ (ದೇವಸ್ಥಾನವಾರು ವಿವರಗಳನ್ನು ನೀಡುವುದು);

ಇ) ಮುಜರಾಯಿ ದೇವಸ್ಥಾನಗಳಲ್ಲಿರುವ ಈ ಹಣವನ್ನು ಯಾವ ಉದ್ದೇಶಗಳಿಗಾಗಿ ಬಳಕೆ ಮಾಡಲಾಗುತ್ತಿದೆ ;

ಈ) ಮುಜರಾಯಿ ದೇವಸ್ಥಾನಗಳ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

ಶ್ರೀ ಡಾ. ವಿ.ಎಸ್. ಆಚಾರ್ಯ (ಗೃಹ ಹಾಗೂ ಮುಜರಾಯಿ ಸಚಿವರು) :–

(ಅ) ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಇರುವ ಮುಜರಾಯಿ ದೇವಸ್ಥಾನಗಳ ಸಂಖ್ಯೆ 40. (ವಿವರವನ್ನು ಅನುಬಂಧದಲ್ಲಿ ಲಗತ್ತಿಸಿದೆ.)

(ಆ) ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ 40 ದೇವಸ್ಥಾನಗಳಲ್ಲಿ ಈ ಕೆಳಕಂಡ 3 ದೇವಸ್ಥಾನಗಳಲ್ಲಿ ಮಾತ್ರ ಹಣವಿರುತ್ತದೆ.

1. ಶ್ರೀ ಸಿದ್ದೇಶ್ವರ ದೇವಸ್ಥಾನ, ಹೊನ್ನಗೇರಿ (ಎ) ಗ್ರಾಮ, ಬೀದರ್ ತಾಲ್ಲೂಕು
   ರೂ. 13,15,350/–
2. ಶ್ರೀ ವೀರಭದ್ರೇಶ್ವರ ದೇವಸ್ಥಾನ, ಚಾಂಗ್ಲೇರ ಗ್ರಾಮ, ಹುಮನಾಬಾದ್ ತಾಲ್ಲೂಕು
   ರೂ. 46,83,262/–
3. ಶ್ರೀ ಬಕ್ಕ ಪ್ರಭು ದೇವಸ್ಥಾನ, ಕರಕನಹಳ್ಳಿ ಗ್ರಾಮ, ಹುಮನಾಬಾದ್ ತಾಲ್ಲೂಕು
   ರೂ. 3,24,894/–